I/731146/2024

ಕರ್ನಾಟಕ ಸರ್ಕಾರ
(ತಾಂತ್ರಿಕ ಶಿಕ್ಷಣ ಇಲಾಖೆ)

ಸಂಖ್ಯೆ: ಡಿಟಿಇ 13 ಎಲ್ಆರ್‌ಡಿಸಿ 2023 (E-1248319)

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು
ದಿನಾಂಕ:26/12/2024

## ಸುತ್ತೋಲೆ

ವಿಷಯ: "ROLLING TROPHY" ಗಳನ್ನು ಪ್ರಾಂಶುಪಾಲರು ಕರ್ನಾಟಕ (ಸರ್ಕಾರಿ) ಪಾಲಿಟೆಕ್ನಿಕ್, ಮಂಗಳೂರು ಇವರಿಗೆ ಹಿಂದಿರುಗಿಸುವ ಬಗ್ಗೆ.

ಉಲ್ಲೇಖ: ಈ ಕಚೇರಿ ಸಮಪತ್ರ ದಿನಾಂಕ:19-12-2024

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2024-25ನೇ ಸಾಲಿನ "45ನೇ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್, ಕ್ರೀಡಾಕೂಟ"ವನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ದಿನಾಂಕ:06-01-2025 ರಿಂದ 08-01-2025 ರವರೆಗೆ ಕರ್ನಾಟಕ ( ಸರ್ಕಾರಿ) ಪಾಲಿಟೆಕ್ನಿಕ್, ಮಂಗಳೂರು, ಸಂಸ್ಥೆಯಲ್ಲಿ ಆಯೋಜಿಸಲಾಗುತ್ತಿದ್ದು, 2023-24ನೇ ಸಾಲಿನ ಕ್ರೀಡಾಕೂಟದಲ್ಲಿ ROLLING TROPHYಗಳನ್ನು ಗೆದ್ದಿರುವ ಸಂಸ್ಥೆಯ ಪ್ರಾಂಶುಪಾಲರುಗಳು ROLLING TROPHYಗಳನ್ನು ದಿನಾಂಕ: 31-12-2024 ರೊಳಗಾಗಿ ಪ್ರಾಂಶುಪಾಲರು, ಕರ್ನಾಟಕ (ಸರ್ಕಾರಿ) ಪಾಲಿಟೆಕ್ನಿಕ್ ಮಂಗಳೂರು, ಇವರಿಗೆ ಕಡ್ಡಾಯವಾಗಿ ಹಿಂದಿರುಗಿಸಲು ಸೂಚಿಸಲಾಗಿದೆ.

ಮುಂದುವರೆದು,ಸತತವಾಗಿ ಮೂರು ಭಾರಿ ವಿಜೇತರಾದ ತಂಡದವರು/ ಕ್ರೀಡಾಪಟುಗಳಿಗೆ ಸಂಬಂಧಿಸಿದ ಸಂಸ್ಥೆಯ ಪ್ರಾಂಶುಪಾಲರುಗಳು ಆಯುಕ್ತಾಲಯಕ್ಕೆ ಮಾಹಿತಿ ನೀಡಿ, ಅನುಮತಿ ಪಡೆದಿದ್ದಲ್ಲಿ ಮಾತ್ರ, ROLLING TROPHYಗಳನ್ನು ಶಾಶ್ವತವಾಗಿ ಸಂಸ್ಥೆಯಲ್ಲಿ ಉಳಿಸಿಕೊಳ್ಳಲು ಅವಕಾಶವಿದ್ದು, ಅನುಮತಿ ಪಡೆದು TROPHYಗಳನ್ನು ಸಂಸ್ಥೆಯಲ್ಲಿಯೇ ಉಳಿಸಿಕೊಂಡಿದ್ದಲ್ಲಿ, ಇಲಾಖೆಗೆ ದಿನಾಂಕ : 31/12/2024ರೊಳಗೆ ಮಾಹಿತಿ ನೀಡುವಂತೆ ಈ ಮೂಲಕ ಸೂಚಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ:

1. ರಾಜ್ಯದ ಸರ್ಕಾರಿ/ಅನುದಾನಿತ/ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರ ಗಮನಕ್ಕೆ– ಸೂಕ್ತ ಕ್ರಮಕ್ಕಾಗಿ
2. ಇ-ಗವರ್ನೆನ್ಸ್ ವಿಭಾಗಕ್ಕೆ– ಇಲಾಖೆಯ ಅಂತರ್ಜಾಲದಲ್ಲಿ ಪ್ರಚುರ ಪಡಿಸಲು

ಪ್ರತಿ: ಎಲ್ಆರ್‌ಡಿಸಿ ಕಡತಕ್ಕೆ